ಪತ್ರಿಕಾ ತುಣುಕು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
ದಿನಾಂಕ : 19

### ಪೌರತ್ವ ತಿದ್ದುಪಡಿ ಕಾಯ್ದೆ ಪರ-ವಿರೋಧ ಸಭೆ, ಧರಣಿಗೆ ನಿರ್ಬಂಧ | ಎಡಿಜಿಪಿ ಅಮರ್‌ಕುಮಾರ್ ಪಾಂಡೆ ಹೇಳಿಕೆ


# ರಾಜ್ಯವ್ಯಾಪಿ 21ರವರೆಗೆ ನಿಷೇಧಾಜ್ಞೆ ಜಾರಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಪೌರತ್ವ ತಿದ್ದುಪಡಿ ಕಾಯ್ದೆ ಜಾರಿ ನಂತರ ಪರ-ವಿರೋಧ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ರಾಜ್ಯವ್ಯಾಪಿ ಗುರುವಾರ (ಡಿ.19) ಬೆಳಗ್ಗೆ 6 ಗಂಟೆಯಿಂದ ಡಿ.21ರ ತಡರಾತ್ರಿ 12ರವರೆಗೆ ನಿಷೇಧಾಜ್ಞೆ ವಿಧಿಸಿ ಪೊಲೀಸ್ ಇಲಾಖೆ ಆದೇಶಿಸಿದೆ.

ನಿಷೇಧಾಜ್ಞೆ ಶಾಲಾ-ಕಾಲೇಜುಗಳು, ಸರ್ಕಾರಿ ಮತ್ತು ಖಾಸಗಿ ವಲಯ ಹಾಗೂ ವಾಣಿಜ್ಯ ವಹಿವಾಟು ಮೇಲೆ ಪರಿಣಾಮ ಬೀರುವುದಿಲ್ಲ. ಅವುಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ. ಪೌರತ್ವ ಕಾಯ್ದೆ ವಿಚಾರವಾಗಿ ಬೀದಿಗಿಳಿದು ಪ್ರತಿಭಟಿಸುವವರಿಗೆ ಮಾತ್ರವಷ್ಟೆ ನಿರ್ಬಂಧಿಸಲಾಗಿದೆ ಎಂದು ರಾಜ್ಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಕಾನೂನು ಮತ್ತು ಸುವ್ಯವಸ್ಥೆ) ಅಮರ್‌ಕುಮಾರ್ ಪಾಂಡೆ ತಿಳಿಸಿದ್ದಾರೆ.

ಕಾನೂನು ಮತ್ತು ಸುವ್ಯವಸ್ಥೆಯನ್ನು ರಾಜ್ಯಾದ್ಯಂತ ಕಾಪಾಡುವ ದೃಷ್ಟಿಯಿಂದ ಸೆಕ್ಷನ್ 144ರಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಪ್ರತಿಭಟನೆಗಳಿಗೆ ಪೊಲೀಸರು ಅನುಮತಿ ನೀಡುವುದಿಲ್ಲ. ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕಮಿಷನರ್‌ಗಳು, ಐಜಿಪಿ ಮತ್ತು ಎಸ್‌ಪಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.



ವಿಜಯವಾಣಿ ಚಿತ್ರ

ಪುಟ್ಟಣ್ಣಚೆಟ್ಟಿ ಪುರಭವನದ ಎದುರು ಪ್ರತಿಭಟನೆ ನಡೆಸದಂತೆ ಪೊಲೀಸರು ಬ್ಯಾರಿಕೇಡ್‌ಗಳನ್ನು ಹಾಕಿರುವುದು.

**ರಾಜಧಾನಿಯಲ್ಲೂ ನಿಷೇಧಾಜ್ಞೆ:** ಪೌರತ್ವ ತಿದ್ದುಪಡಿ ಕಾಯ್ದೆ ಮತ್ತು ನಾಗರಿಕ ರಾಷ್ಟ್ರೀಯ ನೋಂದಣಿ ಜಾರಿ ಕುರಿತು ಪರ ಮತ್ತು ವಿರೋಧ ಅಭಿಪ್ರಾಯ ವ್ಯಕ್ತಪಡಿಸಿ ಪ್ರತಿಭಟನೆ, ಮೆರವಣಿಗೆ ನಡೆಸಲು 60ಕ್ಕೂ ಅಧಿಕ ಸಂಘ-ಸಂಸ್ಥೆಗಳು ಅನುಮತಿ ಕೋರಿದ್ದವು. ನಗರದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮೂರು ದಿನ 144 ಸೆಕ್ಷನ್ ನಿಷೇಧಾಜ್ಞೆ ಆದೇಶ ಹೊರಡಿಸಲಾಗಿದೆ ಎಂದು ಬುಧವಾರ ರಾತ್ರಿ 9 ಗಂಟೆಗೆ ತುರ್ತು ಸುದ್ದಿಗೋಷ್ಠಿ ನಡೆಸಿದ ನಗರ ಪೊಲೀಸ್ ಆಯುಕ್ತ ಭಾಸ್ಕರ್ ರಾವ್ ತಿಳಿಸಿದರು.

## ಪ್ರತಿಭಟನೆ, ರ್ಯಾಲಿ ಮಾಡುವಂತಿಲ್ಲ

ನಗರದಲ್ಲಿ ಪ್ರತಿಭಟನೆ ನಡೆಸಲು ಈಗಾಗಲೇ ಕೆಲ ಸಂಘ-ಸಂಸ್ಥೆಗಳಿಗೆ ಅನುಮತಿ ನೀಡಲಾಗಿತ್ತು. ಆದರೆ, ಇದೀಗ ನಿಷೇಧಾಜ್ಞೆ ಹೊರಡಿಸಿದ ಸಮಯದಿಂದ ಆ ಎಲ್ಲ ಅನುಮತಿ ರದ್ದಾಗಿವೆ. ಯಾರೊಬ್ಬರೂ ಪ್ರತಿಭಟನೆ, ರ್ಯಾಲಿ, ಸಭೆ, ಧರಣಿ, ಗುಂಪು ಸೇರುವುದು ಮಾಡುವಂತಿಲ್ಲ.

## ಸಾರ್ವಜನಿಕ ಜೀವನಕ್ಕೆ ಅಡ್ಡಿ ಇಲ್ಲ

ಶಾಲಾ, ಕಾಲೇಜು, ಸರ್ಕಾರಿ ಕಚೇರಿ, ಮಾಲ್‌ಗಳು, ಅಂಗಡಿಗಳು ಎಂದಿನಂತೆ ತೆರೆದಿರಲಿವೆ. ಬಿಎಂಟಿಸಿ, ರೈಲು, ಕೆಎಸ್‌ಆರ್‌ಟಿಸಿ, ಮೆಟ್ರೋ ರೈಲು, ಕ್ಯಾಬ್‌ಗಳು ಸಂಚರಿಸಲಿವೆ. ಮದ್ಯದಂಗಡಿಗಳೂ ತೆರೆದಿರುತ್ತವೆ.

ನಿಷೇಧಾಜ್ಞೆ ಆದೇಶ ಉಲ್ಲಂಘಿಸಿ ರಸ್ತೆಗೆ ಇಳಿದರೆ ಐಪಿಸಿ ಸೆಕ್ಷನ್‌ನಲ್ಲಿ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ತೆಗೆದುಕೊಳ್ಳಲಾಗುತ್ತದೆ. ಸಾರ್ವಜನಿಕರ ಜತೆ ಸೌಜನ್ಯದಿಂದ ವರ್ತಿಸುವಂತೆ ಎಲ್ಲ ಪೊಲೀಸರಿಗೂ ಸೂಚನೆ ನೀಡಿದ್ದೇನೆ ಎಂದರು.

ಪೌರತ್ವ ಕಾಯ್ದೆ ಪರ ಮತ್ತು ವಿರೋಧ ಪ್ರತಿಭಟನೆ, ಸಭೆಗಳಿಂದ ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟಾಗುತ್ತದೆ ಎಂಬ ಮಾಹಿತಿ ಗುಪ್ತಚರ ಇಲಾಖೆಯಿಂದ ಲಭ್ಯವಾಗಿದೆ. ಹಿರಿಯ ಅಧಿಕಾರಿಗಳ ಜತೆ ಸಭೆ ನಡೆಸಿ ಈ ನಿರ್ಧಾರಕ್ಕೆ ಬರಲಾಗಿದೆ ಎಂದರು.

ಶಾಲಾ ಕಾಲೇಜುಗಳಿಗೆ ರಜೆ ಇರುವುದಿಲ್ಲ. ಎಂದಿನಂತೆ ತರಗತಿಗಳು ನಡೆಯಲಿವೆ.

| ಎಸ್. ಸುರೇಶ್ ಕುಮಾರ್
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ

ಯಾವುದೇ ಹಿಂಸಾಚಾರ ನಡೆಯುವ ಸಾಧ್ಯತೆಯಿಲ್ಲ. ಶಾಂತಿಯುತ ಪ್ರತಿಭಟನೆ ಹತ್ತಿಕ್ಕುವ ಉದ್ದೇಶದಿಂದ ಸರ್ಕಾರ ನಿಷೇಧಾಜ್ಞೆ ಹೇರಿದೆ. ಇದು ಸರಿಯಾದ ಕ್ರಮವಲ್ಲ.

ಡಾ. ಜಿ. ಪರಮೇಶ್ವರ್ ಮಾಜಿ ಡಿಸಿಎಂ

ಸಾರ್ವಜನಿಕರು ಆತಂಕ ಪಡಬೇಕಿಲ್ಲ. ಎಂದಿನಂತೆ ಕೆಲಸ ಕಾರ್ಯಗಳಲ್ಲಿ ತೊಡಗಬಹುದು. ಶಾಲಾ- ಕಾಲೇಜು, ಸಾರ್ವಜನಿಕ ಸಾರಿಗೆ ಎಂದಿನಂತೆ ಇರಲಿವೆ.

| ಭಾಸ್ಕರ್ ರಾವ್
ನಗರ ಪೊಲೀಸ್ ಆಯುಕ್ತ